ಕಛೇರಿ : +91 80 2287 4039
+91 80 2235 4085
ಫ್ಯಾಕ್ಸ್ : +9180 2228 5591
ಇ-ಮೇಲ್ : com-hfws@karnataka.gov.in

# ಆಯುಕ್ತಾಲಯ

## ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು

ಆಯುಕ್ತರು/ಆಕುಕ/ಆಶಾ/2020/ ದಿನಾಂಕ: 19/08/2020

### ಅಧಿಕೃತ ಜ್ಞಾಪನಾ

ವಿಷಯ: ಇಲಾಖೆಯಲ್ಲಿ ಕೋವಿಡ್-19 ನಿಯಂತ್ರಣ ಕಾರ್ಯದಡಿ ನೇಮಕಾತಿ ಹೊಂದಿರುವ ಗುತ್ತಿಗೆ ನೌಕರರ ಮೇಲ್ವಿಚಾರಣೆ ನಡೆಸಲು ನೋಡಲ್ ಅಧಿಕಾರಿಗಳನ್ನು ನೇಮಿಸುತ್ತಿರುವ ಬಗ್ಗೆ.

---

ಕೋವಿಡ್-19 ಸಾಂಕ್ರಾಮಿಕ ಹಿನ್ನೆಲೆಯಲ್ಲಿ ಇಲಾಖೆಯಲ್ಲಿನ ಅವಶ್ಯವಿರುವ ಖಾಲಿ ಹುದ್ದೆಗಳ ಕೊರತೆಯನ್ನು ನೀಗಿಸುವ ಸಲುವಾಗಿ ವೈದ್ಯಕೀಯ ಹಾಗೂ ಅರೆ ವೈದ್ಯಕೀಯ ಹುದ್ದೆಗಳ ವೃಂದಗಳಿಗೆ ಗುತ್ತಿಗೆ ಆಧಾರದ ಮೇಲೆ ನೌಕರರ ಸೇವೆಯನ್ನು ತುರ್ತಾಗಿ ಪಡೆಯಲಾಗಿದೆ. ಹಲವು ಜಿಲ್ಲೆಗಳಲ್ಲಿ ಗುತ್ತಿಗೆ ಆಧಾರದ ಸೇವೆಯನ್ನು ಅವಶ್ಯಕತೆಗೆ ಅನುಗುಣವಾಗಿ ಭರ್ತಿ ಮಾಡದಿರುವುದರಿಂದ ವೈದ್ಯಕೀಯ ಸೇವೆಯಲ್ಲಿ ವ್ಯತ್ಯಯವಾಗಿರುವುದು ಗಮನಕ್ಕೆ ಬಂದಿರುತ್ತದೆ. ಆದ್ದರಿಂದ, ರಾಜ್ಯದಲ್ಲಿ ಕೋವಿಡ್ ನಿಯಂತ್ರಣದ ಸಲುವಾಗಿ ನೇಮಿಸಲಾದ ಮಾನವ ಸಂಪನ್ಮೂಲದ ಸರಿಯಾದ ನಿರ್ವಹಣೆ **ಬಗ್ಗೆ ಹೆಚ್ಚಿನ ನಿಗಾ ವಹಿಸಲು ಹಾಗೂ ಮೇಲ್ವಿಚಾರಣೆ ನಡೆಸಲು ಮುಖ್ಯ ಆಡಳಿತಾಧಿಕಾರಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಇವರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸಲಾಗಿದೆ.**

ಮುಂದುವರೆದು, ಈ ರೀತಿ ನೇಮಕವಾಗಿರುವ ಗುತ್ತಿಗೆ ಆಧಾರದ ನೌಕರರಿಗೆ ವೇತನ ಸೇರಿದಂತೆ ಇತ್ಯಾದಿ ಭತ್ಯೆಗಳು ಸರಿಯಾಗಿ ಪಾವತಿಯಾಗುತ್ತಿಲ್ಲವೆಂದು ದೂರುಗಳು ಸ್ವೀಕೃತವಾಗುತ್ತಿದ್ದು, ಇಂತಹ **ಪ್ರಕರಣಗಳಲ್ಲಿ ಸರಿಯಾದ ಕಾಲಕ್ಕೆ ವೇತನ-ಭತ್ಯೆಗಳ ಪಾವತಿ ಕುರಿತು ಮೇಲ್ವಿಚಾರಣೆ ಹಾಗೂ ನಿಗಾ ವಹಿಸಲು ಮುಖ್ಯ ಲೆಕ್ಕಾಧಿಕಾರಿ ಹಾಗೂ ಆರ್ಥಿಕ ಸಲಹೆಗಾರರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಇವರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸಲಾಗಿದೆ.**

ನೇಮಿಸಲಾದ ನೋಡಲ್ ಅಧಿಕಾರಿಗಳು ತಮಗೆ ವಹಿಸಿರುವ ಮೇಲ್ವಿಚಾರಣೆ ಕಾರ್ಯದ ಪರಿಶೀಲನೆಯನ್ನು ನಡೆಸಿ, ಈ ಕೆಳಗೆ ಸಹಿ ಮಾಡಿರುವ ಪ್ರಾಧಿಕಾರಕ್ಕೆ ತಪ್ಪದೇ ವಾರಕ್ಕೊಂದು ಬಾರಿ ವರದಿ ಸಲ್ಲಿಸಲು ಸೂಚಿಸಿದೆ.

19.08

**ಆಯುಕ್ತರು,**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು.**

**ಇವರಿಗೆ,**

1. ಮುಖ್ಯ ಆಡಳಿತಾಧಿಕಾರಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ.
2. ಮುಖ್ಯ ಲೆಕ್ಕಾಧಿಕಾರಿ ಹಾಗೂ ಆರ್ಥಿಕ ಸಲಹೆಗಾರರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ.

**ಪ್ರತಿಯನ್ನು ಮಾಹಿತಿಗಾಗಿ:**

1. ಆಯುಕ್ತರು, ಬಿಬಿಎಂಪಿ.
2. ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
3. ಅಭಿಯಾನ ನಿರ್ದೇಶಕರು, ಎನ್.ಹೆಚ್.ಎಂ.
4. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು.
5. ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು.

**3ನೇ ಮಹಡಿ, ಐಪಿಪಿ ಕಟ್ಟಡ, ಆನಂದ್ ರಾವ್ ವೃತ್ತ, ಬೆಂಗಳೂರು - 560 009.**